**ದಿನಾಂಕಃ 07.08.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 2ನೇ ಎದುದಾರರ ಪರ ಮಾನ್ಯ ವಕೀಲರಿಂದ.**

ನಾನು ಹೋಗುತ್ತಿದ್ದ ವಾಹನಕ್ಕೆ ನಾನೇ ಮಾಲೀಕನಾಗಿರುತ್ತೇನೆ. ನಾನು ನನ್ನ ವಾಹನದ ಮುಂಭಾವನ್ನು ಕಾರಿನ ಹಿಂಭಾಗಕ್ಕೆ ಡಿಕ್ಕಿಪಡಿಸಿದ ಪರಿಣಾಮ ಅಪಘಾತ ಉಂಟಾಗಿರುತ್ತದೆ ಎಂದರೆ ಸರಿಯಲ್ಲ. ರವಿಕುಮಾರ್ ಎಂಬುವವರು ಅಪಘಾತವನ್ನು ನೋಡಿಲ್ಲ ಎಂದರೆ ಸರಿ. ಪರಿಹಾರ ಪಡೆಯುವ ಉದ್ದೇಶದಿಂದ ನನ್ನ ತಪ್ಪಿ ನಿಂದ ಅಪಘಾತವಾಗಿದ್ದರೂ ಸಹ ಆಪಾದಿತ ವಾಹನದ ವಿರುದ್ಧ ಸುಳ್ಳು ದೂರು ನೀಡಿರುತ್ತೇವೆ ಎಂದರೆ ಸರಿಯಲ್ಲ. ಪೊಲೀಸರಿಗೆ ಅಪಘಾತದ ಸ್ಥಳವನ್ನು ಮತ್ತು ಆಪಾದಿತ ವಾಹನವನ್ನು ನಾನು ಆಸ್ಪತ್ರೆಯಿಂದ ಬಿಡುಗಡೆಗೊಂಡ ನಂತರ ತೋರಿಸಿಲ್ಲ. ಪೊಲೀಸರೊಂದಿಗೆ ಶಾಮೀಲಾಗಿ ದಾಖಲಾತಿಗಳನ್ನು ಸೃಷ್ಟಿಸಿ ಸುಳ್ಳು ದೂರು ನೀಡಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆಪಾದಿತ ವಾಹನದ ಚಾಲಕನ ತಪ್ಪಿ ನಿಂದ ಅಪಘಾತವಾಗಿಲ್ಲ ಎಂದರೆ ಸರಿಯಲ್ಲ. ಆದ ಕಾರಣ 2ನೇ ಎದುರುದಾರರು ಪರಿಹಾರ ಪಾವತಿಸಲು ಬಾಧಸ್ಥರಲ್ಲ ಎಂದರೆ ಸರಿಯಲ್ಲ.

ನಾನು ಈಗ ಮೊದಲಿನಂತೆ ಆರೋಗ್ಯವಾಗಿದ್ದೇನೆ ಎಂದರೆ ಸರಿಯಲ್ಲ. ಅಪಘಾತದಲ್ಲಿ ಉಂಟಾದ ಗಾಯಗಳು ವಾಸಿಯಾಗಿವೆ ಎಂದರೆ ಸರಿಯಲ್ಲ. ಚಿಕಿತ್ಸೆಗೆ ನಾನು ಹೇಳಿರುವಷ್ಟು ಹಣ ಖರ್ಚು ಆಗಿಲ್ಲ ಎಂದರೆ ಸರಿಯಲ್ಲ. ಅಪಘಾತವಾದ ಸಮಯದಲ್ಲಿ ನನಗೆ ಆರೋಗ್ಯ ವಿಮೆ ಇತ್ತು ಎಂದರೆ ಸರಿಯಲ್ಲ. ವೈದ್ಯಕೀಯ ವೆಚ್ಚಗಳು ನನಗೆ ಮರುಪಾವತಿಯಾಗಿದೆ ಎಂದರೆ ಸರಿಯಲ್ಲ. ನಿಪಿ 10 ರಲ್ಲಿನ ಮೊತ್ತವನ್ನು ಯಾವ ರೀತಿ ಪಾವತಿಸಲಾಗಿದೆ ಎಂದು ನನಗೆ ಗೊತ್ತಿಲ್ಲ.

ನಾನು ಕೆಲಸ ಮಾಡುವ ಸಂಸ್ಥೆಯಲ್ಲಿ ಒಟ್ಟು 240 ಜನ ಕೆಲಸಗಾರರು ಇದ್ದಾರೆ. ಸದರಿ ಸಂಸ್ಥೆಯಲ್ಲಿ ಆರೋಗ್ಯ ವಿಮೆ ಮಾಡಿಸಿರುತ್ತಾರೆ ಎಂದರೆ ಸರಿಯಲ್ಲ. ನಿಪಿ 10 ಅಂತಿಮ ಬಿಲ್ ಆಗಿರುವುದಿಲ್ಲ ಎಂದರೆ ಅದರ ಬಗ್ಗೆ ನನಗೆ ಗೊತ್ತಿಲ್ಲ. ಅಂತಿಮ ಬಿಲ್ಲನ್ನು ವಿಮೆ ಮೂಲಕ ಹಣ ಪಡೆಯಲು ನೀಡಿರುತ್ತೇನೆ ಎಂದರೆ ಸರಿಯಲ್ಲ. ರೂ.12,40,000/- ಗಳನ್ನು ನಾನು ಪಾವತಿಸಿಲ್ಲ ಎಂದರೆ ಸರಿಯಲ್ಲ. ನಿಪಿ 10 ಕ್ಕೆ ಸಂಬಂಧಪಟ್ಟ ವ್ಯಕ್ತಿಯನ್ನು ವಿಚಾರಣೆಗೆ ಒಳಪಡಿಸಲು ತೊಂದರೆ ಇಲ್ಲ ಎಂದರೆ ಸರಿ. ಅವಶ್ಯಕ ಔಷಧಿಗಳ ಬಗ್ಗೆ ವೈದ್ಯರು ಚೀಟಿ ನೀಡುತ್ತಿದ್ದರು. ನಿಪಿ 10ರ ಕ್ರಮ ಸಂಖ್ಯೆ 3-77 ರವರೆಗಿನ ಬಿಲ್ಲುಗಳ ಮೊತ್ತ ಕ್ರಮ ಸಂಖ್ಯೆ 1 ರ ಬಿಲ್ಲಿನಲ್ಲಿ ಒಳಗೊಂಡಿದೆ ಎಂದರೆ ಅದರ ಬಗ್ಗೆ ನನಗೆ ಗೊತ್ತಿಲ್ಲ. ನಾನು ವೈದ್ಯಕೀಯ ವೆಚ್ಚಗಳನ್ನು ಪಡೆಯಲು ಅರ್ಹನಲ್ಲ ಎಂದರೆ ಸರಿಯಲ್ಲ. ನನ್ನ ಸಂಬಳದ ಹಣವನ್ನು ಖಾತೆಗೆ ಹಾಕುತ್ತಿದ್ದರು. ನಾನು ಚಿಕಿತ್ಸೆ ಪಡೆಯುತ್ತಿದ್ದ ಸಮಯದಲ್ಲಿ ಸಂಸ್ಥೆಯಿಂದ ಸಂಬಳವನ್ನು ನೀಡಿದ್ದಾರೆ ಎಂದರೆ ಸರಿಯಲ್ಲ. 2023ರ ಜೂನ್ ತಿಂಗಳಿನಲ್ಲಿ ನನ್ನ ಖಾತೆಗೆ ಸಂಬಳದ ಹಣ ಜಮಾ ಆಗಿದೆ ಎಂದರೆ ಸರಿಯಲ್ಲ. ನನ್ನ ಖಾತೆಗೆ ಸಂಬಂಧಿಸಿದ ದಾಖಲಾತಿಗಳನ್ನು ಹಾಜರುಪಡಿಸಲು ತೊಂದರೆ ಇಲ್ಲ ಎಂದರೆ ಸರಿ. ಅಪಘಾತದಿಂದ ನನಗೆ ಯಾವುದೇ ರೀತಿಯ ಆರ್ಥಿಕ ನಷ್ಟ ಉಂಟಾಗಿಲ್ಲ ಎಂದರೆ ಸರಿಯಲ್ಲ. ನನಗೆ 36 ಕ್ಕಿಂತ ಹೆಚ್ಚಿನ ವಯಸ್ಸು ಆಗಿದೆ ಎಂದರೆ ಸರಿಯಲ್ಲ.

ನಮ್ಮ ಕುಟುಂಬವರ ಮತ್ತು ನನ್ನ ಹೆಸರನ್ನು ಹೇಳಲು ತೊಂದರೆ ಇಲ್ಲ ಎಂದರೆ ಸರಿ. ವಸ್ತುಗಳ ಬಣ್ಣವನ್ನು ಗುರುತಿಸಲು ಸಾಧ್ಯವಿದೆ ಎಂದರೆ ಸರಿಯಲ್ಲ. ನಾನು ಬೆಳಿಗಿನ ಉಪಹಾರ ಏನು ತಿಂದಿರುತ್ತೇನೆ ಎಂದು ಹೇಳಲು ಆಗುತ್ತದೆ. ಯಾವುದೇ ಸಂಖ್ಯೆಯನ್ನು ನೋಡಿದರೆ ಗುರುತಿಸಲು ಆಗುತ್ತದೆ. ಅಪಘಾತಕ್ಕೂ ಪೂರ್ವದಲ್ಲಿ ನನಗೆ ಬಣ್ಣಗಳನ್ನು ಗುರುತಿಸಲು ಆಗುತ್ತಿತ್ತು. ಪರಿಹಾರ

ಪಡೆಯುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**